(ಇ) **ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು**

ಶ್ರೀ ಆರ್. ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು) : ಮಾನ್ಯ ಅಧ್ಯಕ್ಷರೆ, ದಿನಾಂಕ: 03.07.2014ರ ಒಂಬತ್ತನೇ ಪಟ್ಟಿಯಿಂದ ಲಿಖಿತ ಮೂಲಕ ಉತ್ತರಿಸುವ 136 ಪ್ರಶ್ನೆಗಳ ಪೈಕಿ 124 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು. (ಅನುಬಂಧ–1)

6. ಪ್ರಕಟಣೆ

ವಿಷಯ: ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಪ್ರತಿಭಾವಂತ ಸಂಸದೀಯ ಪಟುಗಳ ಪುಸ್ತಕ ಬಿಡುಗಡೆ ಸಮಾರಂಭ

ಅಧ್ಯಕ್ಷರು: ದಿನಾಂಕ: 03.07.2014ರಂದು ಅಂದರೆ, ಈ ದಿನ ಸಂಜೆ 5.30 ಗಂಟೆಗೆ ವಿಕಾಸ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಪ್ರತಿಭಾವಂತ ಸಂಸದೀಯ ಪಟುಗಳ ಪುಸ್ತಕ ಬಿಡುಗಡೆ ಸಮಾರಂಭ ಕಾರ್ಯಕ್ರಮ ಆಯೋಜಿಸಲಾಗಿರುತ್ತದೆ. ಸದರಿ ಸಮಾರಂಭದಲ್ಲಿ ಎಲ್ಲಾ ಮಾನ್ಯ ಸದಸ್ಯರುಗಳು ಪಾಲ್ಗೊಳ್ಳಬೇಕೆಂದು ಈ ಮೂಲಕ ನಾನು ವಿನಂತಿಸಿ ಕೊಳ್ಳುತ್ತೇನೆ.

7. ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು

ವಿಷಯ: ಬಿಸಿಎಂ ಹಾಸ್ಟೇಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಮರು ಅವಕಾಶ ಕಲ್ಪಿಸುವ ಬಗ್ಗೆ.

ಶ್ರೀ ಎಂ. ಪಿ. ಅಪ್ಪಚ್ಚು ರಂಜನ್ (ಮಡಿಕೇರಿ): ಮಾನ್ಯ ಅಧ್ಯಕ್ಷರೆ, ಬಿಸಿಎಂ ಹಾಸ್ಟೆಲ್‌ಗಳಲ್ಲಿದ್ದುಕೊಂಡು ಮೊದಲನೇ ವರ್ಷದ ಡಿಗ್ರಿಯಲ್ಲಿ ಓದುತ್ತಿರುವಾಗ ಅವರೇನಾದರೂ ಮೊದಲ ವರ್ಷದ ಡಿಗ್ರಿಯಲ್ಲಿ ಎರಡು subject ಗಳಲ್ಲಿ ಫೇಲ್ ಆದರೆ ಅವರು ಎರಡನೇ ವರ್ಷ ಅಲ್ಲಿರುವುದಕ್ಕೆ ಅವಕಾಶ

ಇಲ್ಲ. ಅವರನ್ನು ಹಾಸ್ಟೆಲ್ ನಿಂದ ತೆಗೆದು ಹಾಕುತ್ತಾರೆ. ಇವತ್ತಿನ ದಿವಸ ಹೆಣ್ಣು ಮಕ್ಕಳು ಮತ್ತು ಬಡವರು ಹಾಗೂ ಕೂಲಿ ಕಾರ್ಮಿಕರ ಮಕ್ಕಳು First Year Degree ಗೆ ಬಿಟ್ಟು ಹೋಗುವಂಥ ಪರಿಸ್ಥಿತಿ ಆಗುತ್ತಿದೆ. ಆದ್ದರಿಂದ ಅಲ್ಲಿಯೂ ಸಹ carry forward ಮಾಡುವಂತಹ ವ್ಯವಸ್ಥೆಯನ್ನು ಮಾಡುತ್ತೀರಾ ಎಂಬ ಬಗ್ಗೆ ಉತ್ತರ ಹೇಳಬೇಕೆಂದು ತಮ್ಮಲ್ಲಿ ವಿನಂತಿ ಮಾಡಿಕೊಳ್ಳುತ್ತೇನೆ. ಇದು ಕೇವಲ ನನ್ನ ಕ್ಷೇತ್ರದ ಸಮಸ್ಯೆ ಅಲ್ಲ. ಇಡೀ ರಾಜ್ಯದಲ್ಲಿರುವ ಹಾಸ್ಟೆಲ್‌ಗಳಲ್ಲಿನ ಸಮಸ್ಯೆ ಆಗಿದೆ.

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು): ಮಾನ್ಯ ಅಧ್ಯಕ್ಷರೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ವಿದ್ಯಾರ್ಥಿಗಳ ಪ್ರವೇಶದ ನಿಯಮಗಳನ್ನು ಸರ್ಕಾರಿ ಆದೇಶ ಸಂಖ್ಯೆ ಸಕಇ 190 ಬಿಎಂಎಸ್ 2001, ಬೆಂಗಳೂರು, ದಿನಾಂಕ 12.06.2001 ರಲ್ಲಿ ರಚಿಸಲಾಗಿದೆ.

ಸದರಿ ಪ್ರವೇಶದ ನಿಯಮಗಳನ್ವಯ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳು ಪ್ರವೇಶಕ್ಕೆ ಅನರ್ಹರು.

ಇತರೆ ಹಿಂದುಳಿದ ವರ್ಗಗಳಾದ ಪ್ರವರ್ಗ 2ಎ, ಪ್ರವರ್ಗ 2ಬಿ, ಪ್ರವರ್ಗ 3ಎ, ಪ್ರವರ್ಗ 3ಬಿ ಗಳಿಗೆ ಸೇರಿದ ವಿದ್ಯಾರ್ಥಿಗಳು ಅನುತ್ತೀರ್ಣರಾಗಿದ್ದಲ್ಲಿ ಅಂತವರಿಗೆ ಪ್ರವೇಶ ನಿಯಮಗಳನ್ವಯ ಪ್ರವೇಶ ನೀಡಲಾಗುತ್ತಿಲ್ಲ.

ಆದರೆ ಪ್ರವರ್ಗ 1, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳು ಕೆಲವು ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದರೂ ಸಹಾ ಮುಂದಿನ ತರಗತಿಗಳಿಗೆ ಪ್ರವೇಶ ಪಡೆಯಲು ಎಟಿಕೆಟಿ ರನ್ವಯ ಅರ್ಹರಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಪಡೆಯಲು ಅರ್ಹರಿರುತ್ತಾರೆ.

ಪ್ರವರ್ಗ 1, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಎಟಿಕೆಟಿ ಸೌಲಭ್ಯವನ್ನು ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿಸ್ತರಿಸಿದಲ್ಲಿ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ತೊಂದರೆಯಾಗುತ್ತದೆ. ಮೆಟ್ರಿಕ್ ನಂತರದ ನಿಲಯಗಳ ಪ್ರವೇಶಕ್ಕೆ

ವಿದ್ಯಾರ್ಥಿಗಳಿಂದ ಹೆಚ್ಚಿನ ಬೇಡಿಕೆ ಇರುತ್ತದೆ. ಪ್ರಯುಕ್ತ ಇತರೆ ಹಿಂದುಳಿದ ವರ್ಗಗಳಾದ ಪ್ರವರ್ಗ 2ಎ, ಪ್ರವರ್ಗ 2ಬಿ, ಪ್ರವರ್ಗ 3ಎ, ಪ್ರವರ್ಗ 3ಬಿ ಗೆ ಸೇರಿದ ವಿದ್ಯಾರ್ಥಿಗಳು ಅನುತ್ತೀರ್ಣರಾಗಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯದಲ್ಲಿ ಮುಂದುವರೆಸುವುದು ಸೂಕ್ತವಿರುವುದಿಲ್ಲ.

ಮಾನ್ಯ ಅಧ್ಯಕ್ಷರೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮಕ್ಕಳಿಗೆ ಮಾತ್ರ ಅಂಥ ಇಂದು ಅವಕಾಶ ಇದೆ. ಕಾರಣ ಏನೆಂದರೆ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಹಣ ಅಲ್ಲಿರುವುದರಿಂದ ಈ ಒಂದು ಅವಕಾಶ ಇದೆ. ಆದರೆ, Backward Classes ನ ಮಕ್ಕಳಿಗೆ ಈ ಅವಕಾಶ ಇಲ್ಲ.

ಶ್ರೀ ಎಂ. ಪಿ. ಅಪ್ಪಚ್ಚು ರಂಜನ್: ದೂರದ ಹಳ್ಳಿಗಳಿಂದ ಬರುತ್ತಾರೆ. ಆದ್ದರಿಂದ, ಈ ಒಂದು ವರ್ಗದ ಮಕ್ಕಳಿಗೂ ಸಹ ಆ ಒಂದು ಅವಕಾಶ ವನ್ನು ಒದಗಿಸಿಕೊಡಬೇಕು.

ಶ್ರೀ ಕೆ. ಜಿ. ಬೋಪಯ್ಯ: ಹಳ್ಳಿಗಳಿಂದ ಬರುವ ವಿದ್ಯಾರ್ಥಿಗಳ ಪ್ರಶ್ನೆಯಾಗಿದೆ. ಒಂದೆರೆಡು ವಿಷಯಗಳಲ್ಲಿ ಫೇಲ್ ಆದರೆ ಅಲ್ಲಿಂದ ತೆಗೆಯ ಬಾರದು. ಅಲ್ಲಿಯೇ ಉಳಿಸುವಂಥ ವ್ಯವಸ್ಥೆ ಮಾಡಬೇಕು.

ಶ್ರೀ ಹೆಚ್. ಆಂಜನೇಯ: ಮಾನ್ಯ ಅಧ್ಯಕ್ಷರೆ, ಇದು ಈಗ ಉದ್ಭವ ವಾಗಿರತಕ್ಕಂಥದ್ದು ಅಲ್ಲ. ಸ್ವಾತಂತ್ರ್ಯ ಬಂದಾಗಿನಿಂದ ಹಿಡಿದು ಇಂದಿನವರೆಗೆ ಹಾಗೆಯೇ ಇದೆ.

ಶ್ರೀ ಕೆ. ಜಿ. ಬೋಪಯ್ಯ: ಮಾನ್ಯ ಸಚಿವರೆ ನೀವು ಬಹಳ ಕಾಳಜಿ ಇರತಕ್ಕಂಥ ಮಂತ್ರಿಗಳಾಗಿದ್ದೀರಿ. ಈ ಬಗ್ಗೆ ಬದಲಾವಣೆ ಮಾಡಿ.

ಶ್ರೀ ಹೆಚ್. ಆಂಜನೇಯ: ಮಾನ್ಯ ಅಧ್ಯಕ್ಷರೆ, ಮುಂದಿನ ಬಜೆಟ್‌ನಲ್ಲಿ ಅದಕ್ಕೆ ಅವಕಾಶ ಮಾಡಿ ಎಂದು ಮಾನ್ಯ ಮುಖ್ಯ ಮಂತ್ರಿಯವರ ಜೊತೆಯಲ್ಲಿ ಮನವಿ ಮಾಡಿಕೊಳ್ಳುತ್ತೇನೆ.

ಶ್ರೀ ಎಂ. ಪಿ. ಅಪ್ಪಚ್ಚು ರಂಜನ್: ಈ ಸಾರಿಯಿಂದಲೇ ಮಾಡಿ. ಅಲ್ಲಿ extra students ಏನೂ ತೆಗೆದುಕೊಳ್ಳುವುದಿಲ್ಲ. ಇರುವಂಥ ವಿದ್ಯಾರ್ಥಿಗಳಿಗೆ ಅಲ್ಲಿಯೇ ಮುಂದುವರಿಯಲು ಅವಕಾಶ ಮಾಡಿಕೊಟ್ಟರೆ ಸಾಕು.

ಅಧ್ಯಕ್ಷರು: ಈ ಬಗ್ಗೆ ಮಾನ್ಯ ಸದಸ್ಯರು ಒಂದು ಅಪೀಲ್ ಮಾಡಿದ್ದಾರೆ. ಮಾನ್ಯ ಮಂತ್ರಿಗಳೇ, ಈ ಬಗ್ಗೆ ಪರಿಶೀಲನೆ ಮಾಡಿ.

ಶ್ರೀ ಹೆಚ್. ಆಂಜನೇಯ: ಆಯಿತು. ಖಂಡಿತ ಮಾಡೋಣ.

ಶ್ರೀ ಎಂ. ಪಿ. ಅಪ್ಪಚ್ಚು ರಂಜನ್: ಇಲ್ಲದಿದ್ದರೆ ಅವರೆಲ್ಲರೂ ಬೀದಿ ಪಾಲು ಆಗುತ್ತಾರೆ. ಅನಂತರ ಅವರು ಓದುವುದಿಲ್ಲ. ಅದರಲ್ಲಿ ವಿಶೇಷವಾಗಿ ಹೆಣ್ಣು ಮಕ್ಕಳು ಓದುವುದಕ್ಕೆ ಹೋಗುವುದಿಲ್ಲ.

ಶ್ರೀ ಹೆಚ್. ಆಂಜನೇಯ: ಖಂಡಿತಾ ಮಾಡೋಣ.

ಅಧ್ಯಕ್ಷರು: ಮಾನ್ಯ ಸಚಿವರೇ, ಈ ಬಗ್ಗೆ ಉತ್ತರ ಕೊಟ್ಟಿದ್ದೀರಿ, ಆದರೆ, ಈ ಬಗ್ಗೆ ಗಮನದಲ್ಲಿಟ್ಟುಕೊಳ್ಳಿ. ಈಗ ಸನದವನ್ನು ನಾಳೆ ಬೆಳಿಗ್ಗೆ 10.00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಸಂಜೆ 5 ಗಂಟೆ 55 ನಿಮಿಷಕ್ಕೆ ಮುಕ್ತಯಗೊಂಡು ಪುನಃ ದಿನಾಂಕ: 3ನೇ ಜುಲೈ 2014ರ ಶುಕ್ರವಾರ ಬೆಳಿಗ್ಗೆ 10.00 ಗಂಟೆಗೆ ಸೇರಲು ನಿಶ್ಚಯಿಸಿತು)